# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಿನಾಂಕ:05.01.2021 ರಂದು ಬೆಳಗ್ಗೆ 11.00 ಗಂಟೆಗೆ ವಾರ್ಡ್ ನಂ.16 ಜಾಲಹಳ್ಳಿಯಲ್ಲಿ ಶ್ರೀ ಹೆಚ್. ಎಸ್. ದಯಾನಂದ, (ಸ.ಕಾ.ನಿ.ಅ,ಕೆಂಗೇರಿ) ನೋಡಲ್ ಅಧಿಕಾರಿರವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

**ಹಾಜರಿದ್ದವರು:-**

| ಕ್ರಮ ಸಂಖ್ಯೆ | ಅಧ್ಯಕ್ಷರು / ಸದಸ್ಯರ ಹೆಸರು | ಪದನಾಮ / ಇಲಾಖೆ |
|---|---|---|
| 1 | ಶ್ರೀ ಹೆಚ್. ಎಸ್. ದಯಾನಂದ | ಸ.ಕಾ.ನಿ.ಅ., ವಾರ್ಡ್ ನೋಡಲ್ ಅಧಿಕಾರಿಗಳು |
| 2 | ಶ್ರೀ ಗಿರೀಶ ಹೆಚ್. ಎನ್. | ಸಹಾಯಕ ಅಭಿಯಂತರರು, ಸದಸ್ಯ ಕಾರ್ಯದರ್ಶಿ |
| 3 | ಆರೋಗ್ಯ ವೈದ್ಯಾಧಿಕಾರಿಗಳು, ಪ್ರಾ. ಆ. ಕೇಂ. | ಪ್ರಾ. ಆ. ಕೇಂ.ದ ಪರವಾಗಿ ಶುಶ್ರೂಷಕಿಯರು ಹಾಜರಿದ್ದರು |
| 4 | ಶ್ರೀ ರಘುನಾಥ್ ಟಿ. | ಹಿರಿಯ ಆರೋಗ್ಯ ಪರಿವೀಕ್ಷಕರು |
| 5 | ಶ್ರೀ ರವಿಕುಮಾರ್ ಕೆ. ಆರ್. | ಕಿರಿಯ ಆರೋಗ್ಯ ಪರಿವೀಕ್ಷಕರು |
| 6 | ಶ್ರೀ ವೇಣು, | ಕಂದಾಯ ವಸೂಲಿಗಾರರು |
| 7 | ಶ್ರೀ ರಾಮಚಂದ್ರ | ಬೆಸ್ಕಾಂ |
| 8 | ಶ್ರೀ ಚಂದನ್ ಕುಮಾರ್ | ಪಿ.ಎಸ್.ಐ. ಜಾಲಹಳ್ಳಿ ಪೋಲಿಸ್ ಠಾಣೆ |
| 9 | ಶ್ರೀ ಪುನೀತ್ | ವಾರ್ಡ್ ಮಾರ್ಷಲ್ |

ಮಾನ್ಯ ಅಧ್ಯಕ್ಷರ ಸ್ವಾಗತದೊಂದಿಗೆ ಅಧಿಕಾರಿಗಳು / ಹಾಜರಿದ್ದವರ ಪರಸ್ಪರ ಪರಿಚಯದೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು.

**1) ಪೋಲಿಸ್ ಇಲಾಖೆ :-**

ಪಿ.ಎಸ್.ಐ.ರವರು ಮಾತನಾಡಿ, ಹೆಚ್.ಎಂ.ಟಿ. ಮೈದಾನದ ಜಂಕ್ಷನ್ ಹಾಗೂ ಹೆಚ್.ಎಂ.ಟಿ. ಮೈದಾನದ ಜಂಕ್ಷನ್‌ಇಂದ ಪ್ರೆಸ್ಟೀಜ್ ಕೆನ್ಸಿಂಗ್ಟನ್ ಅಪಾರ್ಟಮೆಂಟ್ ಕಡೆಗೆ ಹೋಗುವ ರಸ್ತೆ ಬದಿಯಲ್ಲಿ ಬೀದಿ ದೀಪಗಳ ವ್ಯವಸ್ಥೆ ಇರುವುದಿಲ್ಲ. ರಾತ್ರಿ ವೇಳೆಯಲ್ಲಿ ಪಾದಚಾರಿಗಳು ಮತ್ತು ವಾಹನ ಸವಾರರಿಗೆ ತೊಂದರೆಯಾಗುವುದು ಕಂಡುಬಂದಿದ್ದು, ಈ ಮಾರ್ಗದಲ್ಲಿ ಬೀದಿ ದೀಪಗಳ ವ್ಯವಸ್ಥೆಯನ್ನು ಮಾಡಿಕೊಡಬೇಕೆಂದು ಸಭೆಗೆ ತಿಳಿಸಿರುತ್ತಾರೆ.

ಮಾನ್ಯ ಅಧ್ಯಕ್ಷರು ಮಾತನಾಡಿ, ಸಂಬಂಧಪಟ್ಟ ಬಿಬಿಎಂಪಿ ವಿದ್ಯುತ್ ವಿಭಾಗ, ರಾ ರಾ ನಗರ ರವರಿಗೆ ಕ್ರಮವಹಿಸಲು ಸೂಚಿಸಿರುತ್ತಾರೆ.

**3) ಘನತ್ಯಾಜ್ಯಗಳ ನಿರ್ವಹಣೆ ಕುರಿತು:-**

ಘನತ್ಯಾಜ್ಯ ಸಂಗ್ರಹಿಸುವಂತಹ ವಾಹನಗಳಿಗೆ ಧ್ವನಿವರ್ಧಕ ಹಾಗೂ ಜಿಪಿಎಸ್ ಅಳವಡಿಸುವಂತೆ ಕಿರಿಯ ಆರೋಗ್ಯ ಪರಿವೀಕ್ಷಕರು ಸಭೆಯಲ್ಲಿ ಚರ್ಚಿಸಿದರು.

ಮಾನ್ಯ ಅಧ್ಯಕ್ಷರು ಮಾತನಾಡಿ ಸಿದ್ಧಾರ್ಥನಗರ ಮತ್ತು ಖಾತಾ ನಗರ ಸ್ಲಂಗಳಲ್ಲಿ ಒಣ ಕಸ ಮತ್ತು ಹಸಿ ಕಸವನ್ನು ವಿಂಗಡಿಸಲು ಜನರಲ್ಲಿ ತಿಳುವಳಿಕೆ ಮೂಡಿಸಲು ಕಿರಿಯ ಆರೋಗ್ಯ ಅಧಿಕಾರಿಗಳಿಗೆ ಸಭೆಯಲ್ಲಿ ಸೂಚಿಸಿದರು. ಅಗತ್ಯ ಸಿಬ್ಬಂದಿಗಳನ್ನು ಪೂರೈಸಲು ಸಂಬಂಧಪಟ್ಟ ಗುತ್ತಿಗೆದಾರರಿಗೆ ಸೂಚಿಸದರು.

**2) ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ:-**

➢ ಹಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡಿ, ಕೋವಿಡ್-19 ರ ವರದಿಯನ್ನು ಸಭೆಯಲ್ಲಿ ಮಂಡಿಸಿದರು ಹಾಗೂ ಎನ್-95 ಮಾಸ್ಕ್‌ಗಳ ಕೊರತೆಯಿದ್ದು, ಸರಬರಾಜು ಮಾಡಲು ಕೋರಿರುತ್ತಾರೆ.

ಮಾನ್ಯ ಅಧ್ಯಕ್ಷರು ಮಾತನಾಡಿ, ಕೋವಿಡ್-19 ಸಾಂಕ್ರಮಿ ರೋಗ ಹರಡುವಿಕೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರದ ಅಧಿಕಾಗಳೊಂದಿಗೆ ಸಭೆಯಲ್ಲಿ ಚರ್ಚಿಸಿ, ಸಲಹೆ ಸೂಚನೆಗಳನ್ನು ನೀಡಿರುತ್ತಾರೆ.

ಸಾರ್ವಜನಿಕ ಸ್ಥಳಗಳಲ್ಲಿ ಮಾಸ್ಕ್ ಕಡ್ಡಾಯವಾಗಿ ಧರಿಸುವುದು ಹಾಗೂ ವ್ಯಕ್ತಿಗತ ಅಂತರವನ್ನು ಪಾಲಿಸಲು ಜನರಲ್ಲಿ ಜಾಗೃತಿ ಮೂಡಿಸುವಂತೆ ಹಾಗೂ ಪಾಲಿಸದೇ ಇರುವವರಿಗೆ ದಂಡ ವಿಧಿಸುವ ಬಗ್ಗೆ ನೋಡಲ್ ಅಧಿಕಾರಿಗಳು ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಿದರು.

ವಾರ್ಡ್‌ನ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ವಿಟಮಿನ್ ಸಿ ಹಾಗೂ ವಿಟಮಿನ್ ಡಿ 3 ಔಷಧಿಯ ಕೊರತೆಯಿದ್ದು, ಸುಮಾರು ತಿಂಗಳಾದರೂ ಔಷಧಿಯನ್ನು ಪೂರೈಸಲು ಆರೋಗ್ಯ ಇಲಾಖೆ ಗಮನ ಕೊಡದೇ ಇರುವುದು ಕಂಡುಬಂದಿದ್ದು, ಕ್ರಮವಹಿಸಲು ಸೂಚಿಸಲಾಯಿತು.

**5) ಕಾಮಗಾರಿ ಇಲಾಖೆ:-**

➢ **ಎಂದಿನಂತೆ 'ಸಹಾಯ 2.0' ಕೋಶದಲ್ಲಿ ದಾಖಲಾಗುವ ಸಾರ್ವಜನಿಕರ ದೂರುಗಳನ್ನು ವಿಲೇ ಮಾಡುವ ಬಗ್ಗೆ ಚರ್ಚಿಸಲಾಗಿದ್ದು,** ಕಾಮಗಾರಿ ಇಲಾಖೆಗೆ ಸಂಬಂಧಪಟ್ಟ ದೂರುಗಳು ಬಾಕಿ ಇದ್ದು, ಇದರ ಬಗ್ಗೆ ವಾರ್ಡ್ ಸಹಾಯಕ ಅಭಿಯಂತರರು ಮಾತನಾಡಿ, ದೂರುಗಳನ್ನು ಶೀಘ್ರವಾಗಿ ಪರಿಹರಿಸುವುದಾಗಿ ಸಭೆಗೆ ತಿಳಿಸಿರುತ್ತಾರೆ.

**6) ಬೆಸ್ಕಾಂ ಇಲಾಖೆ:-**

ಬೆಸ್ಕಾಂನವರು ಕಟಾವು ಮಾಡಿದ ಮರಗಳ ರೆಂಬೆಗಳನ್ನು ತೆರವುಗೊಳಿಸುವ ಬಗ್ಗೆ ಮಾನ್ಯ ಅಧ್ಯಕ್ಷರು ಮಾತನಾಡಿ, ಪ್ರಸ್ತಾಪಿತ ವಿಷಯದ ಬಗ್ಗೆ ಸಭೆಯಲ್ಲಿ ಹಾಜರಿದ್ದ ಬೆಸ್ಕಾಂ ಕಿರಿಯ ಅಭಿಯಂತರರಿಗೆ ಕೂಡಲೇ ಕ್ರಮವಹಿಸಲು ಸೂಚಿಸಿರುತ್ತಾರೆ

**6) ಬೀದಿ ದೀಪಗಳ ಬಗ್ಗೆ :-**

ವಾರ್ಡ್ ವ್ಯಾಪ್ತಿಯಲ್ಲಿನ ಬೀದಿ ದೀಪಗಳ ಕಾರ್ಯನಿರ್ವಹಣೆಯನ್ನು ಪರಿವೀಕ್ಷಿಸಲು ಸಂಬಂಧಪಟ್ಟ ಗುತ್ತಿಗೆದಾರರಿಗೆ ಸೂಚಿಸಲಾಯಿತು.

**7) ಪೌರ ಕಾರ್ಮಿಕರ ಆರೋಗ್ಯದ ಬಗ್ಗೆ:**

ಹಿಂದಿನ ಸಭೆಯಲ್ಲಿ ನಿರ್ಣಯಿಸಿದಂತೆಯೇ, ಪೌರ ಕಾರ್ಮಿಕರಿಗೆ ಪ್ರತಿ ತಿಂಗಳು ಕೋವಿಡ್ ಟೆಸ್ಟ್ ಮಾಡಿಸಲು ಸೂಚಿಸಿರುತ್ತಾರೆ. ಮಾನ್ಯ ಅಧ್ಯಕ್ಷರು ಮಾತನಾಡಿ, ಆಯುಕ್ತರು, ಬಿಬಿಎಂಪಿರವರ ಆದೇಶದನ್ವಯ ಪೌರ ಕಾರ್ಮಿಕರಿಗೆ ಪ್ರತಿ ತಿಂಗಳು ಕೋವಿಡ್ ಟೆಸ್ಟ್ ಮಾಡಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ಪೌರ ಕಾರ್ಮಿಕರ ಆರೋಗ್ಯದ ಹಿತದೃಷ್ಟಿಯಿಂದ, ಪೌರ ಕಾರ್ಮಿಕ ಸಿಬ್ಬಂದಿಗಳಿಗೆ ಮಾಸ್ಕ್, ಗ್ಲೌಸ್ ಹಾಗು ಸ್ಯಾನಿಟೈಸರ್‌ಗಳನ್ನು ವಿತರಿಸಲು ಅಧ್ಯಕ್ಷರು ಸಭೆಯಲ್ಲಿ ಸೂಚಿಸಿರುತ್ತಾರೆ.

**8) ಬಿಡಬ್ಲ್ಯೂಎಸ್‌ಎಸ್‌ಬಿ:-**

ಬಿಡಬ್ಲ್ಯೂಎಸ್‌ಎಸ್‌ಬಿ ವತಿಯಿಂದ ಕೈಗೊಳ್ಳಲಾಗಿರುವ ಸ್ಯಾನಿಟರಿ ಕೆಲಸಗಳಲ್ಲಿ, ತ್ಯಾಜ್ಯಗಳನ್ನು ರಸ್ತೆಯಲ್ಲಿಯೇ ಬಿಟ್ಟಿದ್ದು, ತೆರವುಗೊಳಿಸಲು ಸಂಬಂಧಪಟ್ಟ ಬಿಡಬ್ಲ್ಯೂಎಸ್‌ಎಸ್‌ಬಿ ರವರಿಗೆ ಕ್ರಮವಹಿಸಲು ಸೂಚಿಸಿರುತ್ತಾರೆ.

ವಾರ್ಡ್ ಪರಿಮಿತಿಯಲ್ಲಿ ಕುಡಿಯುವ ನೀರಿನ ಅಭಾವ ಉಂಟಾಗದಂತೆ, ಸಮರ್ಪಕವಾಗಿ ಸರಬರಾಜು ಮಾಡುವಂತೆ ಕ್ರಮ ಕೈಗೊಳ್ಳಲು ಸೂಚಿಸಿರುತ್ತಾರೆ.

ಕೊನೆಯದಾಗಿ ಅಧ್ಯಕ್ಷರು ಮಾತನಾಡಿ, ವಾರ್ಡ್ ವ್ಯಾಪ್ತಿಯಲ್ಲಿ ಸಾರ್ವಜನಿಕರ ಸಮಸ್ಯೆ / ದೂರುಗಳನ್ನು ದಾಖಲಿಸಲು ವಾರ್ಡ್ ನಲ್ಲಿ ದೂರು ದಾಖಲಿಸುವ ಪುಸ್ತಕ ಲಭ್ಯವಿರುವಂತೆ ನೋಡಿಕೊಂಡು ಬರುವ ದೂರುಗಳನ್ನು ಆದ್ಯತೆಯ ಮೇರೆಗೆ ಕ್ರಮವಹಿಸುವಂತೆ ಹಾಗೂ ಪ್ರತಿ ವಾರ ಸಾಮೂಹಿಕ ಸ್ವಚ್ಛತಾ ಕಾರ್ಯಕ್ರಮವನ್ನು ಮುಂದುವರೆಸುವಂತೆ ಸೂಚಿಸುತ್ತಾ, ಸಕಾಲದಲ್ಲಿ ಸಾರ್ವಜನಿಕ ಕುಂದುಕೊರತೆಗಳಿಗೆ ಸ್ಪಂದಿಸಿ ಪರಿಹರಿಸಲು ಕ್ರಮ ಕೈಗೊಂಡು ಇಲಾಖೆಗಳು ಸಮನ್ವಯತೆಯಿಂದ ಕೆಲಸ ನಿರ್ವಹಿಸಲು ಸೂಚಿಸಿದರು.

ಮೇಲ್ಕಂಡ ಸಮಸ್ಯೆಗಳ ಬಗ್ಗೆ ಸುದೀರ್ಘವಾಗಿ ಚರ್ಚಿಸಿ, ಕಾರ್ಯದರ್ಶಿಯವರ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

(ಗಿರೀಶ ಟಿ.ಎನ್.)
ಸಹಾಯಕ ಅಭಿಯಂತರರು ಹಾಗೂ
ಸದಸ್ಯ ಕಾರ್ಯದರ್ಶಿ
ವಾರ್ಡ್ ಸಂಖ್ಯೆ:16

(ಹೆಚ್. ಎಸ್. ದಯಾನಂದ)
ಸ.ಕಾ.ನಿ.ಅ. ಹಾಗೂ
ವಾರ್ಡ್ ನೋಡಲ್ ಅಧಿಕಾರಿ
ವಾರ್ಡ್ ಸಂಖ್ಯೆ:16